ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಳ್ಳಕೆರೆ-577522,
ಚಿತ್ರದುರ್ಗ ಜಿಲ್ಲೆ.

ಸಂಖ್ಯೆ: ಆ2/ಎಲ್.ಕೆ.ಜಿ., ಯುಕೆ.ಜಿ. /ಅನುಮತಿ / ಸಿ.ಆರ್-36/ 05-06 ದಿನಾಂಕ: 02-06-2006

ಜ್ಞಾಪನ

ವಿಷಯ: 2006-07ನೇ ಸಾಲಿಗೆ ಎಲ್.ಕೆ.ಜಿ/ಯು.ಕೆ.ಜಿ. ತರಗತಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: 1. ಕಾರ್ಯದರ್ಶಿ ವೇದವತಿ ಎಜ್ಯುಕೇಷನ್ ಟ್ರಸ್ಟ್ (ರಿ) ಪರಶುರಾಂಪುರ ಚಳ್ಳಕೆರೆ ತಾ. ಇವರ ಪ್ರಸ್ತಾವನೆ ಕೋರಿ, ದಿನಾಂಕ: 25-01-2006
2. ಶ್ರೀ ಎಂ.ರೇವಣ್ಣ ಸಿದ್ದಪ್ಪ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇಲಾಖೆ, ಚಳ್ಳಕೆರೆ, ಇವರ ಸ್ಥಳ ಪರಿಶೀಲನೆ ವರದಿ ದಿನಾಂಕ:. 28 -03-2006
3. ಕರ್ನಾಟಕ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇವರ ಆದೇಶ ಸಂಖ್ಯೆ: ಇ.ಡಿ-273 / ಪಿ.ಜಿ.ಸಿ./2005, ದಿ:12-12-2005.

ಪ್ರಸ್ತಾವನೆ:-

**ಕಾರ್ಯದರ್ಶಿ ವೇದಾವತಿ ಎಜ್ಯುಕೇಷನ್ ಟ್ರಸ್ಟ್ (ರಿ) ಪರಶುರಾಂಪುರ ಚಳ್ಳಕೆರೆ ತಾ** ಇವರು ಉಲ್ಲೇಖ (1) ರ ಪತ್ರದಲ್ಲಿ ಈ ಕಛೇರಿಗೆ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿರುವಂತೆ ಸದರಿ ಆಡಳಿತ ಮಂಡಳಿಯವರು **ಚಳ್ಳಕೆರೆ (ತಾ) ಪರಶುರಾಂಪುರ ಗ್ರಾಮದಲ್ಲಿ** 2006-07ನೇ ಸಾಲಿನಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ. ತರಗತಿಗಳನ್ನು ನಡೆಸಲು ಅನುಮತಿಯನ್ನು ಕೋರಿರುವಂತೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ಆದೇಶ:

ಉಲ್ಲೇಖ (1) ರ ಪತ್ರದವರು ಈ ಕಛೇರಿಯನ್ನು ಕೋರಿರುವಂತೆ ಉಲ್ಲೇಖ (3)ರ ಆದೇಶದ ಪ್ರಕಾರ ಈ ಕುರಿತು ಉಲ್ಲೇಖ (2) ರಲ್ಲಿ ಸ್ಥಳ ಪರಿಶೀಲಿಸಿರುವಂತೆ ವರದಿಯ ಆಧಾರದ ಮೇಲೆ ಮೇಲ್ಕಂಡ ಸಂಸ್ಥೆಯ ವತಿಯಿಂದ ಚಳ್ಳಕೆರೆ (ತಾ) ಪರಶುರಾಂಪುರ ಗ್ರಾಮದಲ್ಲಿ 2006-07 ನೇ ಸಾಲಿನಲ್ಲಿ ಕನ್ನಡ ಮಾಧ್ಯಮದಲ್ಲಿ **ವೇದಾವತಿ ಕನ್ನಡ** ಎಲ್.ಕೆ.ಜಿ. ಮತ್ತು ಯು.ಕೆ.ಜಿ. ತರಗತಿಗಳನ್ನು ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ನಡೆಸಲು ಅನುಮತಿ ನಿಡಿದೆ. ಹಾಗೂ ಪ್ರಾರಂಭಿಸಿದ ಕೂಡಲೇ ಈ ಕಛೇರಿಗೆ ವರದಿ ಮಾಡಲು ತಿಳಿಸಿದೆ.

ಮುಂದಿನ ಪುಟಕ್ಕೆ

ನಿಬಂಧನೆಗಳು:

1) ಈ ಆದೇಶವು ತಾತ್ಕಾಲಿಕವಾಗಿದ್ದು, ಇಲಾಖೆ ವಿಧಿಸಿದ ನಿಯಮಗಳನ್ನು ಪಾಲಿಸದೇ ಇರುವ ಯಾವುದೇ ಸಮಯದಲ್ಲಿ ಶಾಲೆ ಮುಚ್ಚಿಸಲಾಗುವುದು.
2) ಇಲಾಖೆಯು ನಿಗಧಿಪಡಿಸಿದ ಪುಸ್ತಕಗಳನ್ನೇ ಉಪಯೋಗಿಸಿಕೊಳ್ಳತಕ್ಕದ್ದು.
3) ವಿದ್ಯಾರ್ಥಿಗಳ ಪೋಷಕರಿಂದ ಯಾವುದೇ ವಂತಿಕೆ ಹಣವನ್ನು ಪಡೆಯಬಾರದು. ಒಂದು ವೇಳೆ ಇಲಾಖೆ ಗಮನಕ್ಕೆ ಬಂದರೆ ಶಾಲೆಯನ್ನು ಮುಚ್ಚಿಸಲಾಗುವುದು.
4) ಶಾಲೆಗೆ ಅಗತ್ಯವಾದ ಕಟ್ಟಡ, ಆಟದ ಮೈದಾನ, ಪಾಠೋಪಕರಣ ಮತ್ತು ಪೀಠೋಪಕರಣಗಳನ್ನು ಅಗತ್ಯ ಪ್ರಮಾಣದಲ್ಲಿ ಒದಗಿಸತಕ್ಕದ್ದು.
5) ಈ ಕಛೇರಿಯಿಂದ ಅನುಮತಿಯನ್ನು ಪಡೆಯದೇ ಮುಂದಿನ ತರಗತಿಗಳನ್ನು ತೆರೆಯಕೂಡದು.
6) ಶಾಲೆಗೆ ಅನುಮತಿ ನೀಡಿರುವ ಕನ್ನಡ ಮಾಧ್ಯಮದಲ್ಲಿಯೇ ನಡೆಸಬೇಕು. ಯಾವುದೇ ಕಾರಣಕ್ಕೂ ಆಂಗ್ಲ ಮಾಧ್ಯಮದಲ್ಲಿ ಬೋಧಿಸದೇ ಭಾಷಾ ನೀತಿಯನ್ನು ಪಾಲಿಸಲು ತಿಳಿಸಿದೆ.
7) ಶಾಲೆಯನ್ನು ಮಂಜೂರು ಮಾಡಿರುವ ಸ್ಥಳದಲ್ಲಿಯೇ ನಡೆಸಬೇಕು.
8) ಇದು ಶಾಶ್ವತ ಅನುದಾನ ರಹಿತ ಶಾಲೆಯಾಗಿರುವುದರಿಂದ ಸರ್ಕಾರದಿಂದ ಯಾವುದೇ ಅನುದಾನವನ್ನು ನೀಡಲಾಗುವುದಿಲ್ಲ.
9) ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1978 ರ ನಿಯಮಗಳನ್ನು ತಪ್ಪದೇ ಪಾಲಿಸಬೇಕು.
10) 1983 ಕರ್ನಾಟಕ ಶಿಕ್ಷಣ-30ರ ಪ್ರಕಾರ ಶಾಲೆ ಪ್ರಾರಂಭವಾದ ಮೂರು ತಿಂಗಳ ಒಳಗೆ ನಮೂನೆ-08ರಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿ, ಇಲಾಖೆ ನೋಂದಣಿಯನ್ನು ಕಡ್ಡಾಯವಾಗಿ ಪಡೆಯಬೇಕು.

ಕ್ಷೇತ್ರ ಶಿಕ್ಷಣಾಧಿಕಾರಿ,
ಸಾರ್ವಜನಿಕ ಶಿಕ್ಷಣ ಇಲಾಖೆ,
ಚಳ್ಳಕೆರೆ 577522, ಚಿತ್ರದುರ್ಗ ಜಿಲ್ಲೆ
ಚಳ್ಳಕೆರೆ (ತಾ), ಚಿತ್ರದುರ್ಗ ಜಿಲ್ಲೆ.

ಇವರಿಗೆ,

ಕಾರ್ಯದರ್ಶಿ
ವೇದಾವತಿ ಎಜ್ಯುಕೇಷನ್ ಟ್ರಸ್ಟ್ (ರಿ)
ಪರಶುರಾಂಪುರ
ಚಳ್ಳಕೆರೆ (ತಾ)

ಪ್ರತಿಯನ್ನು:

1) ಈ ಕಛೇರಿಯ ಶಿಕ್ಷಣ ಸಂಯೋಜಕರಾದ ಶ್ರೀ ಜಿ.ಶಿವಣ್ಣ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2) ಜ್ಞಾಪನ ಕಡತಕ್ಕೆ.
3) ಕಛೇರಿ ಕಡತ.

ಕರ್ನಾಟಕ ಸರ್ಕಾರ
(ಸಾರ್ವಜನಿಕ ಶಿಕ್ಷಣ ಇಲಾಖೆ)
ನಮೂನೆ - 2
(ನಿಯಮ 3 ಉಪನಿಯಮ 5 (ಐ) )

ಪ್ರಮಾಣ ಪತ್ರ ಸಂಖ್ಯೆ :ಆ2:ಶಾ.ನೊಂ.ಕು/ಸಿ.ಆರ್- 72 /2002-2003 ದಿನಾಂಕ:- 26/04/07

# ಶಿಕ್ಷಣ ಇಲಾಖಾ ನೊಂದಣಿ ಪ್ರಮಾಣ ಪತ್ರ

ವೇದಾವತಿ ಎಜುಕೇಷನ್ ಟ್ರಸ್ಟ್(ರಿ)ಪರಶುರಾಮಪುರ, ಚಳ್ಳಕೆರೆ ತಾಲ್ಲೂಕು ಚಿತ್ರದುರ್ಗ ಜಿಲ್ಲೆ ಗವರ್ನಿಂಗ ಕೌನ್ಸಿಲನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1-1995) ಸೆಕ್ಷನ್ 31 ರಂತೆ ಈ ದಿನ ಇಪ್ಪತ್ತೆಂಟ ಏಪ್ರಿಲ್ ಎರಡು ಸಾವಿರದ ಏಳರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ಇಲಾಖೆಯೀ ನೋಂದಾಯಿಸಲಾಗಿದೆ ಎಂದು ಪ್ರಮಾಣಿಕರಿಸಲಾಗಿದೆ.

| | | |
|---|---|---|
| 01. | ಇಲಾಖಾ ನೊಂದಣಿ ಸಂಖ್ಯೆ | : 01/2007-08 |
| 02. | ಶಿಕ್ಷಣ ಸಂಸ್ಥೆಯ ವಿವರ | : ವೇದಾವತಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ, ಚಳ್ಳಕೆರೆ ರಸ್ತೆ, ಪರಶುರಾಮಪುರ,ಚಳ್ಳಕೆರೆ ತಾ, ಚಿತ್ರದುರ್ಗ ಜಿಲ್ಲೆ |
| 03. | ಆಡಳಿತ ಮಂಡಳಿಯ ಸ್ವರೂಪ | : ಸಾಮಾನ್ಯ |
| 04. | ಅನುಮತಿ ನೀಡಿದ ತರಗತಿ | : ಒಂದನೇ ತರಗತಿ ಯಿಂದ ಐದನೇ ತರಗತಿವರೆಗೆ |
| 05. | ಪ್ರಾರಂಭಿಸಬೇಕಾದ ತರಗತಿಗಳು ಹಾಗೂ ಶೈಕ್ಷಣಿಕ ವರ್ಷ | : 2007-08ರಲ್ಲಿ ಒಂದನೇ ತರಗತಿ |
| 06. | ಅನುಮತಿ ನೀಡಿದ ಮಾಧ್ಯಮ | : ಕನ್ನಡ ಮಾಧ್ಯಮ |
| 07. | ನೊಂದಣಿ ಶುಲ್ಕ ಪಾವತಿ ಮಾಡಿರುವುದು | : ರೂ. 10,000/- |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ :01/07-08 ಪುಟ ಸಂಖ್ಯೆ : 30 ಮತ್ತು 31 ವಾಲ್ಯೂಂ ಸಂಖ್ಯೆ ಒಂದರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಾಣಿ ವಹಿಯಲ್ಲಿ ನೋಂದಾಯಿಸಲಾಗಿದೆ.

<u>ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.</u>

01. ಈ ನೋಂದಾವಣೆಯ ನಿಯಮ 3 (5) . (1) ಕ್ಕೆ ಒಳಪಟ್ಟಿರುತ್ತದೆ.
02. ಗೌರ್ನಿಂಗ್ ಕೌನ್ಸಿಲ್ ಇವರು ನಿಯಮ 4 (4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
03. ಶಾಲಾ ನಿವೇಶನ ವಿಸ್ತೀರ್ಣ ಕಟ್ಟಡ, ಪಾಠ ಮತ್ತು ಪೀಠೋಪಕರಣ, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
04. ಈ ಶಿಕ್ಷಣ ಸಂಸ್ಥೆಗೆ ಪರಶುರಾಮಪುರ,ಚಳ್ಳಕೆರೆ ತಾ ಇಲ್ಲಿ ಖಾಸಗಿಯಾಗಿ ಕನ್ನಡ ಪ್ರಾಥಮಿಕ ಶಾಲೆ ತೆರೆದು ನೋಂದಾಯಿಸುವ ವಿಚಾರವನ್ನು ಸರ್ಕಾರಿ ಆದೇಶ ಸಂಖ್ಯೆ : ಇಡಿ 14 ಎಸ್.ಎಸ್. 98 ದಿನಾಂಕ 17/03/98 ರನ್ವಯ ಪರಿಶೀಲಿಸಲಾಗಿದೆ. ಚಳ್ಳಕೆರೆ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ಶಿಕ್ಷಣ ಸಂಯೋಜಕರಾದ ಶ್ರೀ ಜೆ.ಸಿ.ಶಿವಣ್ಣ ಇವರ ವರದಿಯ ಅನ್ವಯ ಈ ಸಂಸ್ಥೆಯು ಶಾಲೆಯನ್ನು ತೆರೆಯಲು ಉದ್ದೇಶಿಸಿರುವ ಸ್ಥಳದಲ್ಲಿ 02 ಕಿ.ಮೀ. ವಿಸ್ತೀರ್ಣದೊಳಗಿನ ಪ್ರದೇಶದಲ್ಲಿ 01 ಸಂಖ್ಯೆ ಸರ್ಕಾರಿ ಪ್ರಾಥಮಿಕ ಶಾಲೆ - ಸಂಖ್ಯೆಯ ಅನುದಾನಿತ ಪ್ರಾಥಮಿಕ ಶಾಲೆಗಳು - ಸಂಖ್ಯೆಯ ಅನುದಾನ ರಹಿತ ಖಾಸಗಿ ಪ್ರಾಥಮಿಕ ಶಾಲೆಗಳು ಈಗ ಅಸ್ತಿತ್ವದಲ್ಲಿರುತ್ತವೆ. ಹಾಗೂ ಈ ಶಾಲೆಗಳು ಸದರಿ ಪ್ರದೇಶದ ಶೈಕ್ಷಣಿಕ ಅಗತ್ಯತೆಯನ್ನು ಪೂರೈಸಿರುವುದನ್ನು ಮನಗಾಣಲಾಗಿ ಆದಾಗ್ಯೂ ಸರ್ವೋಚ್ಚ ನ್ಯಾಯಾಲಯವು ಉನ್ನಿಕೃಷ್ಣನ್ ಪ್ರಕರಣದಲ್ಲಿ 14 ವರ್ಷಗಳ ವಯೋಮಿತಿಯೊಳಗಿನ ಮಕ್ಕಳಿಗೆ ಉಚಿತ ಶಿಕ್ಷಣದ ಸಂವಿಧಾನಾತ್ಮಕ ಹಕ್ಕನ್ನು ಎತ್ತಿ ಹಿಡಿದು ಉಚಿತ ಹಾಗೂ.ಕಡ್ಡಾಯ ಪ್ರಾಥಮಿಕ ಶಿಕ್ಷಣ ಒದಗಿಸುವ ರಾಜ್ಯ ಸರ್ಕಾರದ ಜವಾಬ್ದಾರಿಯನ್ನು ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಸಹ ಒದಗಿಸಬಹುದೆಂದು ಹಾಗೂ ರಾಜ್ಯ ಸರ್ಕಾರವು ನಡೆಸುವ ಶಾಲೆಗೆ ತಮ್ಮ ಮಕ್ಕಳನ್ನು ಕಳುಹಿಸಲು ಇಚ್ಚಿಸದೇ ಇರುವ ಪೋಷಕರ ಮಕ್ಕಳ ಶೈಕ್ಷಣಿಕ ಅಗತ್ಯತೆಯನ್ನು ಕಂಡು ಖಾಸಗಿ ಶಿಕ್ಷಣ ಸಂಸ್ಥೆಗಳು ಪೂರೈಸುತ್ತವೆ ಎಂಬ ಅಂಶವನ್ನು ಎತ್ತಿ ಹಿಡಿದಿದೆ. ಸದರಿ ಸ್ಥಳದಲ್ಲಿ ಮತ್ತೊಂದು ಪ್ರಾಥಮಿಕ ಶಾಲೆಯ ಅಗತ್ಯತೆಯು ಇಲ್ಲದಿದ್ದರೂ ಸರ್ಕಾರಿ ಅಥವಾ ಅನುದಾನಿತ ಶಾಲೆಗಳಿಗೆ ತಮ್ಮ ಮಕ್ಕಳನ್ನು

22. ಕರ್ನಾಟಕ ಸರ್ಕಾರದ ಇತ್ತೀಚಿನ ಆದೇಶದಂತೆ ಭಾಷಾ ನೀತಿಯನ್ನು ತಪ್ಪದೇ ಅನುಸರಿಸತಕ್ಕದ್ದು. ಒಂದು ವೇಳೆ ಈ ಆದೇಶವನ್ನು ಮೀರಿ ಆಂಗ್ಲ ಭಾಷೆಯಲ್ಲಿ ಬೋಧಿಸುವುದು ಇಲಾಖೆಯ ಗಮನಕ್ಕೆ ಬಂದಲ್ಲಿ ಕೂಡಲೇ ಈ ಆದೇಶವನ್ನು ರದ್ದು ಪಡಿಸಲಾಗುವುದು.

ಕ್ಷೇತ್ರ ಶಿಕ್ಷಣಾಧಿಕಾರಿ,
ಸಾರ್ವಜನಿಕ ಶಿಕ್ಷಣ ಇಲಾಖೆ,
ಚಳ್ಳಕೆರೆ-577522, ಚಿತ್ರದುರ್ಗ ಜಿಲ್ಲೆ

ಪ್ರತಿಯನ್ನು :

1) ಸರ್ಕಾರದ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು 1 ಇವರಿಗೆ ಮಾಹಿತಿಗಾಗಿ ವಂದನೆಗಳೊಂದಿಗೆ ಸಲ್ಲಿಸಿದೆ.
2) ಮಾನ್ಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಚಿತ್ರದುರ್ಗ ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ. ಇವರಿಗೆ ವಂದನೆಗಳೊಂದಿಗೆ ಸಲ್ಲಿಸಿದೆ.
3) ಜಿಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಇವರಿಗೆ ವಂದನೆಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ಕಾರ್ಯದರ್ಶಿಗಳು, ಶ್ರೀ ವೇದಾವತಿ ಎಜುಕೇಷನ್ ಟ್ರಸ್ಟ್ (ರಿ)ಪರಶುರಾಮಪುರ, ಚಳ್ಳಕೆರೆ ತಾಲ್ಲೂಕು ಇವರಿಗೆ ಸೂಕ್ತ ಕ್ರಮಕ್ಕಾಗಿ
5) ಈ ಕಛೇರಿಯ ಸಂಬಂಧಿಸಿದ ಶಿಕ್ಷಣ ಸಂಯೋಜಕರಾದ ಶ್ರೀ ಜಿ.ಸಿ.ಶಿವಣ್ಣ ಇವರಿಗೆ ಮಾಹಿತಿಗಾಗಿ ನೀಡಿದೆ ಹಾಗೂ ಶಾಲೆ ಪ್ರಾರಂಭವಾದ ನಂತರ ವರದಿ ಮಾಡಲು ಹಾಗೂ ಶೈಕ್ಷಣಿಕ ಪ್ರಗತಿಯನ್ನು ಪರಿಶೀಲಿಸಲು ತಿಳಿಸಿದೆ.
6) ಜ್ಞಾಪನಾ ಕಡತಕ್ಕೆ
7) ಕಛೇರಿ ಕಡತಕ್ಕೆ.

**-:: ಉಪನಿರ್ದೇಶಕರವರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ-ಜಿಲ್ಲೆ, ಚಿತ್ರದುರ್ಗ ::-**

ಸಂಖ್ಯೆ:ಅನು1(ಎ).ಖಾ.ಪ್ರಾ.ಶಾ.ಆ.ಮಾ.ಪ.149926(1)/2015-16 ದಿನಾಂಕ:-28.09.2016.

ನಮೂನೆ-4

(ನಿಯಮ 7 ರ ಉಪನಿಯಮ 3 ರಂತೆ)

ಪರಿಷ್ಕರಿಸಲ್ಪಟ್ಟ ನೊಂದಣಿ ಪ್ರಮಾಣ ಪತ್ರ

ಕ್ರಮ ಸಂಖ್ಯೆ 023/2015-16

ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, (ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸವನ್ನು ನಮೂದಿಸುವುದು) ಈ ಸಂಸ್ಥೆಯು ಕೆಳಗಿನ ಶಾಲೆಯನ್ನು ನಡೆಸಲು ನೋಂದಾಯಿಸಲ್ಪಟ್ಟಿದೆ.

| ಕ್ರಮ ಸಂಖ್ಯೆ | ಶಾಲೆಯ ಹೆಸರು ಮತ್ತು ವಿಳಾಸ (ಸಂಸ್ಥೆಯ ವರ್ಗ) | ಅನುಮತಿ ನೀಡಿದ ತರಗತಿ | ಪ್ರಾರಂಭಿಸಿದ ವರ್ಷ | ಅನುಮತಿ ನೀಡಿದ ಮಾಧ್ಯಮ | ಪಾವತಿಸಿರುವ ಶುಲ್ಕ |
|---|---|---|---|---|---|
| 01 | ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ವೇದಾವತಿ ಕನ್ನಡ ಮಾಧ್ಯಮ ಕಿರಿಯ ಪ್ರಾಥಮಿಕ ಶಾಲೆ, ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ | 01 ರಿಂದ 5ನೇ ತರಗತಿ (ಅನುದಾನ ರಹಿತ) | 2007-08 | ಕನ್ನಡ ಮಾಧ್ಯಮ | 10000-00 |

ಮೇಲಿನ ಆಡಳಿತ ಮಂಡಳಿಯು, ಕರ್ನಾಟಕ ಶಿಕ್ಷಣ ಕಾಯ್ದೆ 1983ರ (1995 ಕರ್ನಾಟಕ ಕಾಯಿದೆ-1) ಸೆಕ್ಷನ್ -31ರ ಉಪನಿಯಮ (5) ರಲ್ಲಿನ ಅವಕಾಶಗಳಂತೆ, ಈ ಮೊದಲು ನೊಂದಣಿ ಮಾಡಿದ ಶಾಲೆಯ ವಿವರಗಳಲ್ಲಿ ಬದಲಾವಣೆಗಳಾಗಿರುವುದನ್ನು ವರದಿ ಮಾಡಿ, ಮೂಲ ನೊಂದಣಿ ಪ್ರಮಾಣ ಪತ್ರವನ್ನು ಪರಿಷ್ಕರಿಸುವಂತೆ ಕೋರಿ ನಮೂನೆ (3) ರಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಪ್ರಯುಕ್ತ, ಈ ಮೊದಲು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಪ್ರಾಧಿಕಾರದಿಂದ (ಮೂಲ ನೋಂದಣಿ ಪ್ರಮಾಣ ಪತ್ರ ವಿತರಿಸಿದ ಪ್ರಾಧಿಕಾರದ ಹೆಸರು ಹಾಗೂ ವಿಳಾಸ ಸಹಿತ ವಿವರಗಳನ್ನು ನಮೂದಿಸತಕ್ಕದ್ದು) ವಿತರಿಸಲಾಗಿದ್ದ 01/07-08 ಕ್ರಮ ಸಂಖ್ಯೆಯು 28.04.2007 ರ ದಿನಾಂಕದ ನೊಂದಣಿ ಪ್ರಮಾಣ ಪತ್ರವನ್ನು ಹಿಂಪಡೆದಿದೆ ಮತ್ತು ರದ್ದು ಪಡಿಸಿದೆ ಹಾಗೂ ಸಂಬಂಧಿತ ವಹಿಯಲ್ಲಿ ಅಗತ್ಯ ನಮೂದುಗಳನ್ನು ಮಾಡಲಾಗಿರುತ್ತದೆ.

ಹಾಗೂ ಇದೀಗ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಇವರ ಹೆಸರಿಗೆ ಕೆಳಕಂಡಂತೆ ಪರಿಷ್ಕೃತ ವಿವರಗಳನ್ನು ನಮೂದಿಸಿ ವಿತರಿಸಲಾಗಿದೆ.

| ಕ್ರಮ ಸಂಖ್ಯೆ | ಶಾಲೆಯ ಹೆಸರು ಮತ್ತು ವಿಳಾಸ (ಸಂಸ್ಥೆಯ ವರ್ಗ) | ಬೋಧನ ಮಾಧ್ಯಮ | ಅನುಮತಿ ನೀಡಿದ ತರಗತಿ | ಶೈಕ್ಷಣಿಕ ಸಾಲು | ಶುಲ್ಕದ ವಿವರ |
|---|---|---|---|---|---|
| 01 | ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ವೇದಾವತಿ ಆಂಗ್ಲ ಮಾಧ್ಯಮ ಕಿರಿಯ ಪ್ರಾಥಮಿಕ ಶಾಲೆ, ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ | ಆಂಗ್ಲ | 01 ರಿಂದ 5ನೇ ತರಗತಿ (ಅನುದಾನ ರಹಿತ) | 2016-17 | --- |

ಈ ಹಿಂದಿನ ಪ್ಯಾರಾಗಳಲ್ಲಿ ಉಲ್ಲೇಖಿಸಿರುವ ಆಡಳಿತ ಮಂಡಳಿಯ ವಿವರಗಳನ್ನು, ಶಿಕ್ಷಣ ಸಂಸ್ಥೆಗಳ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲಾಗಿರುವ ನೊಂದಣಿ ವಹಿಯ 01 ವಾಲ್ಯೂಂನ ಪುಟ ಸಂಖ್ಯೆ : 03 ರ ಕ್ರಮ ಸಂಖ್ಯೆ:23 ರಲ್ಲಿ ಸರ್ಕಾರಿ ಆದೇಶ ಸಂಖ್ಯೆ ಇಡಿ:549 :ಪಿಜಿಸಿ :2015 ದಿನಾಂಕ: 02-11-2015 ರನುಸಾರ ಪ್ರದತ್ತವಾದ ಅಧಿಕಾರದಂತೆ ನೋಂದಾಯಿಸಲಾಗಿದೆ.

ಈ ನೊಂದಣಿ ಪತ್ರವನ್ನು ದಿನಾಂಕ: 28.09.2016 ರಂದು ವಿತರಿಸಲಾಗಿದೆ.

[ಎಂ.ರೇವಣ ಸಿದ್ದಪ್ಪ]
ಉಪನಿರ್ದೇಶಕರು(ಆಡಳಿತ)
ಹಾಗೂ ನೊಂದಣಿ ಪ್ರಾಧಿಕಾರಿ
ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ
28/9/16

ಗೆ,

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
2. ಕಾರ್ಯದರ್ಶಿಗಳು, ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
3. ಮುಖ್ಯ ಶಿಕ್ಷಕರು, ವೇದಾವತಿ ಆಂಗ್ಲ ಕಿರಿಯ ಪ್ರಾಥಮಿಕ ಶಾಲೆ, ಪರಶುರಾಂಪುರ, ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ.
4. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು ರವರ ಅವಗಾಹನೆಗೆ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಪ್ರತಿ

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

## ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು,ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ: ಸಿ7[4]ಪ್ರಾಶಿಅ:ನೋಂದಣಿ/13/2012-13 ದಿನಾಂಕ: 15/03/2013

ನಮೂನೆ-2

(ನಿಯಮ 3 ಉಪನಿಯಮ 5 (ಬಿ)

ಪ್ರಮಾಣ ಪತ್ರ ಸಂಖ್ಯೆ : 80/2013-14

**ವೇದಾವತಿ ಎಜುಕೇಷನ್ ಟ್ರಸ್ಟ್ (ರಿ) ಪರಶುರಾಂಪುರ, ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ ಇವರಿಗೆ** ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆ್ಯಕ್ಟ್ 1995) ಸೆಕ್ಷನ್ 31 ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಇಡಿ 44 ಪಿ ಜಿ ಸಿ 2002, ದಿನಾಂಕ : 11.06.2002 ರ ಪ್ರಕಾರ ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು **ಕ್ರಮ ಸಂಖ್ಯೆ 80 ಪುಟ ಸಂಖ್ಯೆ: 135 ವಾಲ್ಯೂಂ ಸಂಖ್ಯೆ: 16** ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಕ್ರಮ ಸಂಖ್ಯೆ | 80/2013-2014 |
| 2. | ಶಾಲೆಯ ಹೆಸರು ಮತ್ತು ವಿಳಾಸ | **ವೇದಾವತಿ ಹಿರಿಯ ಪ್ರಾಥಮಿಕ ಶಾಲೆ** (ರಿ) ಪರಶುರಾಂಪುರ, ಚಳ್ಳಕೆರೆ ತಾ: ಚಿತ್ರದುರ್ಗ |
| 3. | ಅನುಮತಿ ನೀಡಿದ ತರಗತಿ | 6 ನೇ ತರಗತಿ 7 ನೇ ತರಗತಿ ಮತ್ತು 8ನೇ ತರಗತಿ [ಶಾಶ್ವತ ಅನುದಾನರಹಿತವಾಗಿ] [Permanently without-aid] |
| 4. | ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | 2013-2014 2014-2015 2015-2016 ಶಾಶ್ವತ ಅನುದಾನ ರಹಿತವಾಗಿ |
| 5. | ಅನುಮತಿ ನೀಡಿದ ಮಾಧ್ಯಮ | ಆಂಗ್ಲ ಮಾಧ್ಯಮ |
| 6. | ಶುಲ್ಕ ಪಾವತಿ ಮಾಡಿರುವುದು | ರೂ. 10,000/- |

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ [ನೋಂದಣಿ] ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೋಂದಾವಣೆಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ,ವರ್ಗೀಕರಣ]ನಿಯಮ-1997 ನಿಯಮ-3 [5] [ಡಿ] ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
2. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗಧೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8 ರನ್ವಯ ಸುರಕ್ಷತಾ ಕ್ರಮವಾಗಿ, ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಚಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ, ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು. ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
3. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-41[5] ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆ್ಯಕ್ಟ್ ಸಂಖ್ಯೆ:1:95]ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.
7. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ 95, ದಿನಾಂಕ : 07-09-98 ಮತ್ತು ದಿನಾಂಕ : 29-12-98 ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. [Permanently without-aid]
8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ [ಶಿಸ್ತು ಮತ್ತು ನಿಯಂತ್ರಣ] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ ಅವುಗಳಿಗೆ ಬದ್ಧವಾಗಿರತಕ್ಕದ್ದು.

---2]

9. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗಧಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಭೋಧಿಸತಕ್ಕದ್ದು ಹಾಗೂ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮವಹಿಸುವುದು.

10. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995. ದಿನಾಂಕ:04-10-96ರ ನಿಯಮ-10ರಂತೆ ಟರ್ಮ್ ಶುಲ್ಕ, ಭೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04)ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ಪೋಷಕರಿಂದ ವಸೂಲಿ ಮಾಡುವ ಶುಲ್ಕಗಳ ವಿವರಗಳ ಒಂದು ಬ್ರೋಚರ್ ಅನ್ನು ಶಾಲೆಯ ಸೂಚನಾಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

11. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.39. ವಿವಿಧ-99. ದಿನಾಂಕ:14-03-2000ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯೂಲೇಷನ್ ಆಫ್ ಸರ್ಟನ್ ಫೀಸ್ ಅಂಡ್ ಡೊನೇಷನ್) ನಿಯಮ-1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಈ ನಿಯಮದಂತೆ ಯಾವುದೇ ವಂತಿಗೆಯನ್ನು ವಸೂಲು ಮಾಡುವಂತಿಲ್ಲ.

12. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿಧ 98, ಬೆಂಗಳೂರು, ದಿನಾಂಕ : 04-11-99 ರಂತೆ ಮಾನ್ಯತೆ ನವೀಕರಣ ಪೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ : 19-05-99 ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

13. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.52ವಿವಿದ.99 ದಿನಾಂಕ:-02-02-2000ರ ಅನೆಕ್ಸರ್-5ರ ನಿಯಮದಂತೆ ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.

**14. 6ನೇ ತರಗತಿಯಿಂದ 8ನೇ ತರಗತಿಗೆ ಬಿಇಡಿ ತರಬೇತಿ ಹೊಂದಿದ ಶಿಕ್ಷಕರನ್ನು ನೇಮಿಸಿಕೊಳ್ಳತಕ್ಕದ್ದು.**

15. ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಒದಗಿಸಬೇಕಾದ ಮೂಲಭೂತ ಸೌಕರ್ಯಗಳಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದ ಒಳಗಾಗಿ ಹಾಗೂ ಆಟದ ಮೈದಾನ ಮತ್ತು ಶಾಲಾ ಕಟ್ಟಡವನ್ನು ಮೂರು ವರ್ಷದೊಳಗಾಗಿ ಒದಗಿಸಿಕೊಳ್ಳತಕ್ಕದ್ದು.

16. ಶಾಲಾ ಕೆಲಸದ ಅವಧಿ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

17. ಶಾಲೆಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.

18. ಈಗಾಗಲೇ 1 ರಿಂದ 7ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ, ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.

19. ಸರ್ಕಾರದ ಸುತ್ತೋಲೆ ಸಂಖ್ಯೆ.ಇಡಿ 27 ಎಸ್‌ಇಪಿ 03 ದಿನಾಂಕ:-13-02-2003 ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಶಿಕ್ಷಕರ/ಸಿಬ್ಬಂದಿ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.

20. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ತಪ್ಪದೇ ನಿಯೋಜಿಸುವುದು.

21. ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು.

22. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ 50 ಕ್ಕೆ ಮೀರಬಾರದು.

23. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

24. ಸರ್ಕಾರದ ಪತ್ರದ ಸಂಖ್ಯೆ:ಇಡಿ:122;ಎಸ್.ಇ.ಎಸ್.2007 ಬೆಂಗಳೂರು ದಿನಾಂಕ:17.05.2007 ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.

25. 1 ರಿಂದ 5 ನೇ ತರಗತಿವರೆಗೆ ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಶಾಲೆಯನ್ನು ನಡೆಸತಕ್ಕದ್ದು.

[ಎಸ್.ಆರ್.ಉಮಾಶಂಕರ್]
ಆಯುಕ್ತರು ಹಾಗೂ ನೋಂದಣಿ ಅಧಿಕಾರಿಗಳು.

ಪ್ರತಿಯನ್ನು.

1. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ ರವರಿಗೆ.
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಳ್ಳಕೆರೆ ತಾಲ್ಲೂಕು.
3. ಕಾರ್ಯದರ್ಶಿಗಳು, ವೇದಾವತಿ ಎಜುಕೇಷನ್ ಟ್ರಸ್ಟ್ (ರಿ) ಪರಶುರಾಂಪುರ, ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ.
4. ಕಛೇರಿ ಪ್ರತಿ.

:- ಉಪ ನಿರ್ದೇಶಕರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ ಚಿತ್ರದುರ್ಗ:-

ಸಂಖ್ಯೆಅನು2/ಖಾಪ್ರೌಶಾ ಮಾನ್ಯತೆ:ನವೀಸಿಆರ್:72/2015-16

ದಿನಾಂಕ:20.10.2015.

:-ಜ್ಞಾಪನ:-

ವಿಷಯ :ವೇದಾವತಿ ಆಂಗ್ಲ ಮಾಧ್ಯಮ ಪ್ರೌಢಶಾಲೆ. ಪರುಶುರಾಂಪುರ. ಚಳ್ಳಕೆರೆ ತಾ. ಚಿತ್ರದುರ್ಗ ಜಿಲ್ಲೆ. ಈ ಶಾಲೆಯ ಮಾನ್ಯತೆ ನವೀಕರಣ ನೀಡುವ ಬಗ್ಗೆ.

ಉಲ್ಲೇಖ:1)ಆಯುಕ್ತರು. ಸಾ.ಶಿ.ಇಲಾಖೆ. ಬೆಂಗಳೂರು. ಅವರ ಪತ್ರ ಸಂಖ್ಯೆ:ಸಿ8(7)ಶಾ.ಶಿ.ಅ.ಸುತ್ತೋಲೆ:01/2005-06. ದಿ:17.09.2005.

2)ಮಾನ್ಯ ನಿರ್ದೇಶಕರು, ಪ್ರಾ.ಶಿ. ಆಯುಕ್ತರ ಕಛೇರಿ, ಬೆಂಗಳೂರು. ಅವರ ಪತ್ರ ಸಂಖ್ಯೆ:ಸಿ8 (7) ಶಾ.ಶಿ.ಅ.ಸುತ್ತೋಲೆ. 01/2005-06. ದಿ:25.01.2006.

3)ಸರ್ಕಾರಿ ಆದೇಶ ಸಂ:ಇಡಿ:113 ವಿವಿಧ 2005.ಬೆಂಗಳೂರು. ದಿನಾಂಕ:02.11.2006.

4)ಕಾರ್ಯದರ್ಶಿಗಳು.ವೇದಾವತಿ ಎಜುಕೇಷನ್ ಟ್ರಸ್ಟ್ (ರಿ). ಪರುಶುರಾಂಪುರ.ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ. ಇವರ ಠರಾವು ದಿ:04.04.2015.

5)ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾ.ಶಿ.ಇಲಾಖೆ. ಚಳ್ಳಕೆರೆ ತಾಲ್ಲೂಕು. ಚಿತ್ರದುರ್ಗ ಜಿಲ್ಲೆ. ಇವರ ಪತ್ರ ಸಂಖ್ಯೆ:ಅ2:ಖಾ:ಪ್ರೌಶಾ:ಮಾ:ನ:ಸಿಆರ್:/2015-16. ದಿ:01.10.2015.

& & &

ವೇದಾವತಿ ಎಜುಕೇಷನ್ ಟ್ರಸ್ಟ್ (ರಿ). ಪರುಶುರಾಂಪುರ. ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ. ಈ ಆಡಳಿತ ಮಂಡಳಿಯ ಅಡಿಯಲ್ಲಿ ನಡೆಯುತ್ತಿರುವ ವೇದಾವತಿ ಆಂಗ್ಲ ಮಾಧ್ಯಮ ಪ್ರೌಢಶಾಲೆ. ಪರುಶುರಾಂಪುರ. ಚಳ್ಳಕೆರೆ ತಾ.. ಚಿತ್ರದುರ್ಗಜಿಲ್ಲೆ. ಶಾಲೆಗೆ ಈ ಹಿಂದೆ,2013-14 ರಿಂದ 2014-15 ನೇ ಸಾಲಿನ ವರೆಗೆ (01.06.2013 ರಿಂದ 31.05.2015) ರವರೆಗೆ ಮಾನ್ಯತೆ ನೀಡಿದ್ದು, ಈಗ 2015-16 ರಿಂದ 2018-2019 ನೇ ಸಾಲಿಗೆ ಅಂದರೆ (01.06.2015 ರಿಂದ 31.05.2019) ರವರೆಗೆ 8 ನೇತರಗತಿಗೆ 1 ವಿಭಾಗ 9 ನೇ ತರಗತಿಗೆ 1 ವಿಭಾಗ 10 ನೇ ತರಗತಿಗೆ 01 ವಿಭಾಗ ಒಟ್ಟು 03 ವಿಭಾಗಗಳಿಗೆ ಶಾಶ್ವತವಾಗಿ ಅನುದಾನವಿಲ್ಲದೆ ಆಂಗ್ಲ ಮಾಧ್ಯಮದಲ್ಲಿ ನವೀಕರಿಸಿದೆ.

| ವರ್ಷ | ಮಾಧ್ಯಮ | 8 ನೇತರಗತಿ | 9 ನೇತರಗತಿ | 10 ನೇತರಗತಿ | ಒಟ್ಟು ವಿಭಾಗಗಳು |
|---|---|---|---|---|---|
| 2015-16 ರಿಂದ 2018-2019 ರವರೆಗೆ | ಆಂಗ್ಲ | 01 | 01 | 01 | 03 ವಿಭಾಗಗಳಿಗೆ ಶಾಶ್ವತ ಅನುದಾನ ರಹಿತವಾಗಿ ಮಾನ್ಯತೆ ನವೀಕರಿಸಿದೆ |

:-ನಿಬಂಧನೆಗಳು:-

1.ಅನುದಾನ ರಹಿತ ಸಂಹಿತೆ ನಿಯಮದಲ್ಲಿ ಉಲ್ಲೇಖವಾಗಿರುವ ನಿಯಮಗಳಡಿ ಪೂರೈಕೆ ಮತ್ತು ಅದರಂತೆ ಕ್ರಮ ತೆಗೆದುಕೊಂಡಿದ್ದಕ್ಕೆ ಸೂಕ್ತ ಷರಾ.

2.ಆಡಳಿತ ಮಂಡಳಿಯು ಸ್ವಂತ ಹಾಗೂ ಶಾಲೆಗೆ ಅನುಕೂಲವಾಗಿರುವ ಕಟ್ಟಡ ಹೊಂದಿರತಕ್ಕದ್ದು.

3.ಶಾಲೆಯ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಫಲಿತಾಂಶವನ್ನು ಮತ್ತು ಉಳಿದ ವರ್ಗಗಳ ಫಲಿತಾಂಶವನ್ನು ಪ್ರತಿ ವರ್ಷ ಉತ್ತಮಪಡಿಸುವುದು.

4.ನಿರ್ದೇಶಕರ ಜ್ಞಾಪನ ಸಂ:ಇ7 [ಜಿ1] ನೇಮಕ 1/85 ದಿ:21-10-75 ರ ಅನ್ವಯ ತರಬೇತಿ ಪಡೆಯದ ಉಪಾಧ್ಯಾಯರು ಅವರ ಸ್ವಂತ ಖರ್ಚಿನಲ್ಲಿ ತರಬೇತಿಯನ್ನು ಪಡೆಯತಕ್ಕದ್ದು.

5.ಅನುದಾನ ರಹಿತ ಸಂಹಿತೆ ನಿಯಮದಂತೆ ಶಾಲೆಗೆ ಬೇಕಾದ ಪೀಠೋಪಕರಣ, ಕ್ರೀಡೋಪಕರಣಗಳೂ, ಪ್ರಯೋಗಶಾಲೆ ಉಪಕರಣಗಳು, ಲೈಬ್ರರಿ ಪುಸ್ತಕಗಳು, ಭೂಪಟಗಳು. ಮುಂತಾದವುಗಳನ್ನು ಖರೀದಿಸಿ ಶಾಲೆಗೆ ಒದಗಿಸತಕ್ಕದ್ದು.

6. 5. ಎಕರೆ ಸಮತಟ್ಟಾದ ಜಾಗವನ್ನು ಆಟದ ಮೈದಾನಕ್ಕೆ ಒದಗಿಸತಕ್ಕದ್ದು.

7. ಇತ್ತೀಚಿನ ಶಿಕ್ಷಣ ಮಸೂದೆ ಪ್ರಕಾರ ಶಾಲೆ ನೋಂದಾಯಿಸಿದ ಬಗ್ಗೆ ದಾಖಲೆ ಇಡುವುದು.

8. ವಿದ್ಯಾರ್ಥಿಗಳ ದಾಖಲಾತಿ ಹಾಜರಾತಿಯನ್ನು ಶಿಕ್ಷಣ ಮಸೂದೆ ನಿಯಮಾನುಸಾರ ಕಾಯ್ದಿರಿಸಿಕೊಳ್ಳತಕ್ಕದ್ದು.

9. ಸ್ಥಿರ ನಿಧಿಯನ್ನು ರೂ30000/- ತಕ್ಷಣ ಜಂಟಿ ಖಾತೆಯಲ್ಲಿ ತೊಡಗಿಸುವ ಮತ್ತು ಜಮೀನನ್ನು ಸಂಸ್ಥೆಯ ಹೆಸರಿಗೆ ನೋಂದಾಯಿಸುವ ನಿಬಂದನೆ ವಿಧಿಸಿದೆ.

10.ಶಾಲೆಯ ಮಕ್ಕಳ ದಾಖಲಾತಿಯ ಮತ್ತು ಹಾಜರಾತಿಯನ್ನು ಉತ್ತಮಪಡಿಸಿಕೊಳ್ಳುವ ನಿಬಂಧನೆ ವಿಧಿಸಿದೆ.

11.ಆರ್.ಟಿ.ಇ.ಪ್ರಕಾರ. ಬಾಲಕ/ಬಾಲಕಿಯರ ಶೌಚಾಲಯ ಮತ್ತು ಮೂಲ ಭೂತ ಸೌಕರ್ಯಗಳನ್ನು ಒದಗಿಸುವ ನಿಬಂಧನೆ ವಿಧಿಸಿದೆ.

(ಶ್ರೀ.ಎಂ.ರೇವಣಸಿದ್ದಪ್ಪ)
ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ.

ಇವರಿಗೆ,

1)ಕ್ಷೇತ್ರ ಶಿಕ್ಷಣಾಧಿಕಾರಿಗಳು. ಸಾರ್ವಜನಿಕ ಶಿಕ್ಷಣ ಇಲಾಖೆ. ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ.
2)ಕಾರ್ಯದರ್ಶಿಗಳು. ವೇದಾವತಿ ಎಜುಕೇಷನ್ ಟ್ರಸ್ಟ್ (ರಿ). ಪರುಶುರಾಂಪುರ.ಚಳ್ಳಕೆರೆ ತಾ: ಚಿತ್ರದುರ್ಗ ಜಿಲ್ಲೆ.
3)ಮುಖ್ಯ ಶಿಕ್ಷಕರು, ವೇದಾವತಿ ಆಂಗ್ಲ ಮಾಧ್ಯಮ ಪ್ರೌಢಶಾಲೆ. ಪರುಶುರಾಂಪುರ. ಚಳ್ಳಕೆರೆ ತಾ.. ಚಿತ್ರದುರ್ಗ ಜಿಲ್ಲೆ.
4)ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ: ಸಿ8(4) ಪಿಯುಸಿ ಹೊಪ್ರೌ/10/2013-14

ದಿನಾಂಕ: 06.06.2013

### ನಮೂನೆ-2

[ನಿಯಮ 3 ಉಪನಿಯಮ 5(ಬಿ)]

### ಪ್ರಮಾಣ ಪತ್ರ ಸಂಖ್ಯೆ:76/2013-14

* * * * *

ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾ. ಚಿತ್ರದುರ್ಗ ಜಿಲ್ಲೆ, ಇವರ ಗವರ್ನಿಂಗ್ ಕೌನ್ಸಿಲ್‌ನ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರೌಢಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸೆಕ್ಷನ್-31ರಂತೆ **2013-14ನೇ** ಸಾಲಿನಿಂದ ಹೊಸ ಪ್ರೌಢಶಾಲೆ ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 01 | ಕ್ರಮ ಸಂಖ್ಯೆ | : 76/2013-14 |
| 02. | ಶಾಲೆಯ ಹೆಸರು ಮತ್ತು ವಿಳಾಸ | : ವೇದಾವತಿ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಪರಶುರಾಂಪುರ, ಚಳ್ಳಕೆರೆ ತಾ, ಚಿತ್ರದುರ್ಗ ಜಿಲ್ಲೆ, |
| 03. | ಅನುಮತಿ ನೀಡಿದ ತರಗತಿ | : 9ನೇ ತರಗತಿ, 10ನೇ ತರಗತಿ. |
| 04. | ಪ್ರಾರಂಭಿಸಬೇಕಾದ ತರಗತಿಗಳು | : 9ನೇ ತರಗತಿ, 10ನೇ ತರಗತಿ. |
| 05. | ಶೈಕ್ಷಣಿಕ ವರ್ಷ | : 2013-14 2014-15 |
| 06. | ಅನುಮತಿ ನೀಡಿದ ಮಾಧ್ಯಮ | : ಆಂಗ್ಲ ಮಾಧ್ಯಮ [ಶಾಶ್ವತ ಅನುದಾನ ರಹಿತ] |
| 07. | ಶುಲ್ಕ ಪಾವತಿ ಮಾಡಿರುವುದು | : D.D. No: 650914, Date: 25.10.2012, Rs. 10,000/- |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂ: 76/2013-14, ಪುಟ ಸಂ:180, ವಾಲ್ಯೂಂ ಸಂ:09ರಲ್ಲಿ ಈ ಕಛೇರಿಯಲ್ಲಿರುವ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

01. 9 ಮತ್ತು 10ನೇ ತರಗತಿಗಳಲ್ಲಿ ನಿಯಮದಂತೆ ಕನಿಷ್ಠ ವಿದ್ಯಾರ್ಥಿಗಳು ದಾಖಲಾಗುವುದನ್ನು ಉಪನಿರ್ದೇಶಕರು ಖಚಿತ ಪಡಿಸಿಕೊಂಡು ಡಿಸೆಂಬರ್ 31ರ ಒಳಗಾಗಿ ಪ್ರಥಮ 'ಮಾನ್ಯತೆ/ನೋಂದಣಿ ನೀಡತಕ್ಕದ್ದು.
02. ಈ ನೋಂದಣಿಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
03. ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
04. ಶಾಲಾ ನಿವೇಶನ, ಸಂಸ್ಥೆಯ ಹೆಸರಿನಲ್ಲಿರಬೇಕು. ಕಟ್ಟಡ, ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ನೋಂದಣಿಯನ್ನು ರದ್ದುಗೊಳಿಸಲಾಗುವುದು
05. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
06. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
07. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.

08. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983ರ ಅಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

09. ಈ ಪ್ರೌಢಶಾಲಾ ನೊಂದಾವಣೆಯಂತೆ ಸರ್ಕಾರಿ ಅಧಿಸೂಚನೆ ಸಂ:ಇಡಿ:175:ಪಿಎಂಸಿ:95, ದಿ:07.09.1998 ಮತ್ತು ದಿ:29.12.1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10/- ಛಾಪಾ ಕಾಗದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

10. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ವಯ ಸರ್ಕಾರದ ಅಧಿಸೂಚನೆ ದಿನಾಂಕ:27.12.2007ರ ಸೂಚನೆಯನ್ನು ಕಡ್ಡಾಯವಾಗಿ ಪಾಲಿಸುವುದು.

11. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

14. ಆಡಳಿತ ಮಂಡಳಿ ಕರ್ನಾಟಕ ಶಿಕ್ಷಣ ಮಸೂದೆ 1983 ನಿಯಮ-36ರಂತೆ ಪ್ರಥಮ ಮಾನ್ಯತೆ/ನೋಂದಣಿ ಪ್ರಸ್ತಾವನೆ ಶೈಕ್ಷಣಿಕ ವರ್ಷ ಪ್ರಾರಂಭವಾದ ಮೂರು ತಿಂಗಳ ಒಳಗಾಗಿ ಪ್ರಸ್ತಾವನೆ ಸಲ್ಲಿಸಿ ಪ್ರಥಮ ಮಾನ್ಯತೆ/ನೋಂದಣಿಯನ್ನು ಪಡೆಯತಕ್ಕದ್ದು, ತಪ್ಪಿದ್ದಲ್ಲಿ ಈ ಅನುಮತಿ ತನ್ನತಾನಗಿಯೇ ರದ್ದಾಗುವುದು.

15. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

16. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

17. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

18. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

19. ಶಾಲೆಯ ಕಟ್ಟಡ ಸುರಕ್ಷತೆ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಸಂಬಂಧಿಸಿದ ಅಗ್ನಿ ಶಾಮಕ ಇಲಾಖೆಯಿಂದ ಕಟ್ಟಡದ ಸುರಕ್ಷತೆ ಬಗ್ಗೆ ಖಚಿತ ಪಡಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

ಆಯುಕ್ತರು
ಹಾಗೂ ನೋಂದಣಿ ಅಧಿಕಾರಿ

ಇವರಿಗೆ:

01. ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ.
02. ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಳ್ಳಕೆರೆ ತಾ, ಚಿತ್ರದುರ್ಗ ಜಿಲ್ಲೆ.
03. ಕಾರ್ಯದರ್ಶಿಗಳು, ವೇದಾವತಿ ಎಜುಕೇಷನ್ ಟ್ರಸ್ಟ್(ರಿ), ಪರಶುರಾಂಪುರ, ಚಳ್ಳಕೆರೆ ತಾ, ಚಿತ್ರದುರ್ಗ ಜಿಲ್ಲೆ.
04. ಕಛೇರಿ ಪ್ರತಿ.

\\Typing3server\typing3server\E\E:ST2\new hs prasad.docx

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಉಪನಿರ್ದೇಶಕರ ಕಛೇರಿ , ಸಾರ್ವಜನಿಕ ಶಿಕ್ಷಣ ಇಲಾಖೆ,CHITRADURGA ಜಿಲ್ಲೆ

# ಮಾನ್ಯತೆ ನವೀಕರಣ ಪ್ರಮಾಣ ಪತ್ರ

**ಸಂಖ್ಯೆ** : 65088

**ದಿನಾಂಕ** : 23-Oct-2024

**ವಿಷಯ** : ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

&&&&

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **VEDAVATHI EDUCATION TRUST PARASHURAMPURA CHALLAKERE** ಆಡಳಿತ ಮಂಡಳಿಯು **29130213924** ಡೈಸ್ ಕೋಡ್ ಸಂಖ್ಯೆ **VEDAVATHI ENG HS P R PURA_VEDAVATHI ENGLISH MEDIUM SCHOOL, PARASHURAMAPURA** ಶಾಲೆಗೆ [ವಿಳಾಸ], **1_10** ತರಗತಿವರೆಗೆ **English** ಮಾಧ್ಯಮಕ್ಕೆ ಶಾಲಾ ಮಾನ್ಯತೆಯನ್ನು ನವೀಕರಿಸಲು ಆನ್ಲೈನ್ನಲ್ಲಿ ಸಲ್ಲಿಸಿದ್ದ ಅರ್ಜಿಯಲ್ಲಿನ ದಾಖಲೆಗಳನ್ನು ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ, ಈ ಕೆಳಕಂಡಂತೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ. | ವಿವರ | ಆನ್ಲೈನ್ ಅರ್ಜಿ ಸಂಖ್ಯೆ : 65088 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | **VEDAVATHI EDUCATION TRUST PARASHURAMPURA CHALLAKERE** |
| 2 | ಶಾಲೆಯ ಹೆಸರು ಮತ್ತು ವಿಳಾಸ | **VEDAVATHI ENG HS P R PURA_VEDAVATHI ENGLISH MEDIUM SCHOOL, PARASHURAMAPURA** |
| 3 | ಡೈಸ್ ಕೋಡ್ ಸಂಖ್ಯೆ: | **29130213924** |
| 4 | ತರಗತಿ | **1 to 10** |
| 5 | ಮಾಧ್ಯಮ | **English** |
| 6 | ವಿಭಾಗ | **10** |
| 7 | ಶಾಲಾ ವಿಧ | **Pvt. Unaided /Renewal Recognition** |
| 8 | ಮಾನ್ಯತೆ ನವೀಕರಿಸಿರುವ ವರ್ಷ | **2024 2025 ಸಾಲಿನಿಂದ 2024 2025 ರವರೆಗೆ** |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿ, ನೋಂದಾಯಿಸಿದ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. ಈ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ಹೆಚ್ಚುವರಿ ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.

2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ 1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.

3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿಡುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತ [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.

4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಭಂದಿಸಿದೆ.

5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರವಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವಇಚ್ಛೆಯಿಂದ ನೀಡುವ ಡೊನೇಷನ್ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಭಂದಿಸಿದೆ.

6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್ಸೈಟ್ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.

7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದೆ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.

8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

(i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

(ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತೃತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ 21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯೆಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (Pಈ)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರೆ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗೆ (ಇSI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್ 24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ 17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ವಿಚಾರಣೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ರಾಜ್ಯ ಪಠ್ಯಕ್ರಮ ಮತ್ತು ರಾಜ್ಯ ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್ 19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

13. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

14. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

15. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

16. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ 2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

17. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

18. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

19. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್ನಲ್ಲಿ ಶಾಲಾ ಮಾಹಿತಿಯನ್ನು ನಿಯಮನುಸಾರ ಅಪ್ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

20. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

21. ಶಾಲಾ ಮಾನ್ಯತೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಆಡಳಿತ ಮಂಡಳಿಯು ಆನ್ ಲೈನ್ ನಲ್ಲಿ ಸಲ್ಲಿಸಿದ ಅರ್ಜಿಯಲ್ಲಿನ ಸಂಪೂರ್ಣ ದಾಖಲೆ/ ಮಾಹಿತಿಗಳನ್ನು ಇಲಾಖಾ ವೆಬ್ ಸೈಟ್ ನಲ್ಲಿ ಸಾರ್ವಜನಿಕವಾಗಿ ವೀಕ್ಷಿಸಲು ಅನುವುಮಾಡಿಕೊಡಲಾಗುವುದು.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

23. ಸಕ್ಷಮ ಪ್ರಾಧಿಕಾರದಿಂದ ಪಡೆದ ಸುರಕ್ಷತಾ ಪ್ರಮಾಣ ಪತ್ರಗಳು ಮತ್ತು ಲೀಸ್ ಕರಾರು ಪತ್ರ ದಾಖಲೆಗಳನ್ನು ಅವುಗಳ ಅವಧಿ ಮುಗಿದ 1 ತಿಂಗಳ ಒಳಗಾಗಿ ನವೀಕರಿಸಿ SATS ನಲ್ಲಿ ಕಡ್ಡಾಯವಾಗಿ ಅಪ್ ಲೋಡ್ ಮಾಡುವುದು.

ಉಪನಿರ್ದೇಶಕರು(ಆಡಳಿತ)

ಸಾರ್ವಜನಿಕ ಶಿಕ್ಷಣ ಇಲಾಖೆ

**CHITRADURGA (2913)** ಜಿಲ್ಲೆ

ಗೆ,

1. ಸಂಬಂಧಿಸಿದ ಆಡಳಿತ ಮಂಡಳಿ **VEDAVATHI EDUCATION TRUST PARASHURAMPURA CHALLAKERE**

2. ಮುಖ್ಯ ಶಿಕ್ಷಕರು, **/VEDAVATHI ENGLISH MEDIUM SCHOOL, PARASHURAMAPURA/VEDAVATHI ENG HS P R PURA**ಶಾಲೆ ಮತ್ತು ವಿಳಾಸ

3. ಕ್ಷೇತ್ರ ಶಿಕ್ಷಣಾಧಿಕಾರಿಗಳು,**CHALLAKERE (291302)** ತಾಲ್ಲೂಕು/ವಲಯ **CHITRADURGA (2913)** ಜಿಲ್ಲೆ.

4. ಕಛೇರಿ ಪ್ರತಿ.